# 32 ನೇ ಅಪರ ಮುಖ್ಯ ಮಹಾನಗರ ದಂಡಾಧಿಕಾರಿಯವರ ನ್ಯಾಯಾಲಯ, ಬೆಂಗಳೂರು

## ಸಿಸಿ ನಂಃ 31209/2022

**CW.**4 : **PW.**7

| | | |
|---|---|---|
| **ಸಾಕ್ಷಿದಾರರ ಹೆಸರು** | : | ಬಾಲರಾಜು |
| **ತಂದೆಯ ಹೆಸರು** | : | ಗುಂಡೇಗೌಡ |
| **ವಯಸ್ಸು** | : | 39 ವರ್ಷ |
| **ಉದ್ಯೋಗ** | : | ಬೇಕರಿಯಲ್ಲಿ ಕೆಲಸ |
| **ವಾಸಸ್ಥಳ** | : | ಶೇಷಾದ್ರಿಪುಂ, ಬೆಂಗಳೂರು. |

**ಸಾಕ್ಷಿಯನ್ನು ದಿನಾಂಕ 04.01.2024 ರಂದು ಕರೆಸಿ ಪ್ರತಿಜ್ಞಾ ವಿಧಿ ಭೋಧಿಸಲಾಯಿತು.**

**ಮುಖ್ಯ ವಿಚಾರಣೆ :- ಮಾನ್ಯ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ-**

ಸಾಕ್ಷಿ ಅಮಾನತ್ತು ಮಹಜರ್ ಅನ್ನು ನೋಡಿ ಗುರುತಿಸಿದ್ದು, ಅದನ್ನು **ನಿಪಿ.9** ಎಂದು, ಸಾಕ್ಷಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿಪಿ.9(ಎ)** ಎಂದು ಗುರುತಿಸಲಾಯಿತು. ಸುಮಾರು 1 ವರ್ಷಗಳ ಹಿಂದೆ ಪೋಲೀಸರು ನನ್ನ ಸಹಿಯನ್ನು ಠಾಣೆಯಲ್ಲಿ ಪಡೆದಿದ್ದರು ಆದರೆ ಅದರಲ್ಲಿ ಬರೆದಿರುವ ವಿಷಯಗಳು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿರುವುದಿಲ್ಲ ಹಾಗೂ ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ.

(ಈ ಹಂತದಲ್ಲಿ ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲನ್ನು ಮಾಡಲು ಅನುಮತಿ ಕೋರುತ್ತಾರೆ. ಅನುಮತಿಯನ್ನು ನೀಡಲಾಯಿತು.)

**ಪಾಟೀ ಸವಾಲು :- ಮಾನ್ಯ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ-**

2. ದಿನಾಂಕ 28.07.2022 ರಂದು ಬೆಳಿಗ್ಗೆ 10.00 ರಿಂದ 10.45 ಗಂಟೆಯ ವರೆಗೆ ನಿಪಿ.9 ರಂತೆ ಮಹಜರ್ ಮಾಡಿದ್ದಾರೆಂದರೆ ಸರಿಯಲ್ಲ. ನಿಮಗೆ ನಿಪಿ.9 ರ ವಿಚಾರ ಗೊತ್ತಿದ್ದರು ಸಹಾ ಆರೋಪಿತನೊಂದಿಗೆ ನೀವು ರಾಜೀ ಮಾಡಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲಿಗಾಗಿ:** ಆರೋಪಿ ಪರ ವಕೀಲರು ಗೈರು ಹಾಜರಾಗಿರುತ್ತಾರೆ. ಆರೋಪಿ ಪರ ವಕೀಲರು ಗೈರು ಹಾಜರಾದ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಪ್ರಕಾರ ಬೆರಳಚ್ಚು ಮಾಡಲಾಯಿತು)

**ಓ ಹೇ ಕೆ ಸ ಇ**

**(ಲತಾ.ಜೆ),**

**32 ನೇ ಎ.ಸಿ.ಎಂ.ಎಂ. ಬೆಂಗಳೂರು.**